ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರ.ವಿ./ 4 /2018-19

ದಿನಾಂಕ: 24-08-2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯಾದ್ಯಂತ ಭಾರಿ ಮಳೆಯಾಗುತ್ತಿದ್ದು, ಪ್ರಕೃತಿ ವಿಕೋಪದಡಿ ಸಂತ್ರಸ್ಥರಾದವರಿಗೆ ಪರಿಹಾರ ವಿತರಣೆ ಮತ್ತು ಪುನರ್‌ವಸತಿ ಕಾರ್ಯ ಪ್ರಗತಿಯಲ್ಲಿದ್ದು, ಅಂಕಿ ಅಂಶ ಸಂಗ್ರಹಿಸಲು ಅಧಿಕಾರಿ ಮತ್ತು ಸಿಬ್ಬಂದಿಗಳ ತಂಡ ರಚಿಸುವ ಬಗ್ಗೆ.

---

ಕೊಡಗು ಜಿಲ್ಲೆಯಲ್ಲಿ ಭಾರೀ ಗಾಳಿ ಮಳೆಯಿಂದ ಮಡಿಕೇರಿ ನಗರದ ಸುತ್ತಮುತ್ತ ಹಾಗೂ ಜಿಲ್ಲೆಯ ಹಲವೆಡೆ ಜಲಾವೃತ ಮತ್ತು ಭೂಕುಸಿತದಿಂದ ಮಾನವ/ ಜಾನುವಾರು ಜೀವಹಾನಿ, ಮನೆಹಾನಿ, ರಸ್ತೆಹಾನಿ ಸೇರಿದಂತೆ ಹಲವು ನಷ್ಟಗಳು ಆಗಿರುತ್ತದೆ. ಸಂಬಂಧಪಟ್ಟ ಪರಿಹಾರ, ಪುನರ್ವಸತಿ, ಮೂಲ ಸೌಕರ್ಯ ವ್ಯವಸ್ಥೆ / ಪುನರ್‌ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುತ್ತದೆ.

ಈ ಸಂಬಂಧ ಪ್ರಕೃತಿ ವಿಕೋಪ ಕುರಿತಾಗಿ ಆಗಿರುವ ನಷ್ಟದ ಕುರಿತಾಗಿ ಪ್ರತಿನಿತ್ಯದ ಅಂಕಿ ಅಂಶ ಮತ್ತು ವರದಿಗಳನ್ನು ಆಗಿಂದಾಗ್ಗೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಂದ ಸಂಗ್ರಹಿಸಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವ ಕುರಿತಾಗಿ ಈ ಕೆಳಕಂಡಂತೆ ಅಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ನೇಮಕ ಮಾಡಿ ಆದೇಶಿಸಿದೆ. ಸದರಿ ಅಧಿಕಾರಿಗಳು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಾಜರಿದ್ದು, ವಹಿಸಲಾದ ಕರ್ತವ್ಯ ನಿರ್ವಹಿಸುವುದು.

| ಕ್ರ.ಸಂ. | ಹೆಸರು ಮತ್ತು ಪದನಾಮ | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ ಎಂ. ಪ್ರಕಾಶ್,<br>ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ,<br>ಮಡಿಕೇರಿ. | 9449007261 |
| 2 | ಶ್ರೀ ವೆಂಕಟೇಶ್,<br>ಸಹಾಯಕ ಸಂಖ್ಯಾ ಸಂಗ್ರಹಣಾಧಿಕಾರಿ,<br>ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ<br>ಕಚೇರಿ, ಮಡಿಕೇರಿ | 9481214417 |

ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು:

1. ಜಿಲ್ಲೆಯ ಉಪ ವಿಭಾಗಾಧಿಕಾರಿ ಹಾಗೂ ತಹಶೀಲ್ದಾರರಿಗೆ ಸೂಕ್ತ ಕ್ರಮಕ್ಕಾಗಿ.
2. ಮೇಲಿನ ಕೋಷ್ಟಕದಲ್ಲಿನ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.